**All India Radio: Bangalore**
**National Bulletin In Kannada**
**07.06.2026 1.10 p.m.**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**07.06.2026 1.10 p.m.**

**<><><><>**

ಮುಖ್ಯಾಂಶಗಳು

1. ಜಾಗತಿಕ ಇಂಧನ ದರ ಏರಿಕೆ ನಡುವೆಯೂ, ಭಾರತದಲ್ಲಿ ಸಬ್ಸಿಡಿ ದರದಲ್ಲೇ ಅಡುಗೆ ಅನಿಲ ಪೂರೈಕೆ: ಕೇಂದ್ರ ಸರ್ಕಾರ ಸ್ಪಷ್ಟನೆ
2. ಭಾರತ- ಇಂಡೋನೇಷಿಯಾ ಜಂಟಿ ಆಯೋಗ ಸಭೆ; ದ್ವಿಪಕ್ಷೀಯ ಬಾಂಧವ್ಯದಲ್ಲಿ ಪ್ರಗತಿ- ಸಚಿವ ಡಾ.ಎಸ್.ಜೈಶಂಕರ್
3. ಇಂದು ವಿಶ್ವ ಆಹಾರ ಸುರಕ್ಷತಾ ದಿನ: ಸುರಕ್ಷಿತ ಮತ್ತು ಆರೋಗ್ಯಕರ ಆಹಾರಕ್ಕೆ ಕೇಂದ್ರ ಸರ್ಕಾರ ಬದ್ಧ - ಕೇಂದ್ರ ಸಚಿವ ಜೆ.ಪಿ.ನಡ್ಡಾ
4. ಟೆಸ್ಟ್ ಕ್ರಿಕೆಟ್; ಅಫ್ಘಾನಿಸ್ತಾನ್ ವಿರುದ್ಧ ಮೊದಲ ಇನ್ನಿಂಗ್ಸ್‌ನಲ್ಲಿ ಬೃಹತ್ ಮೊತ್ತ ಕಲೆ ಹಾಕಿದ ಭಾರತ
5. ಫ್ರೆಂಚ್ ಓಪನ್ ಟೆನಿಸ್; ಪುರುಷರ ಫೈನಲ್‌ನಲ್ಲಿಂದು ಅಲೆಕ್ಸಾಂಡರ್ ಜ್ವೆರೇವ್ - ಫ್ಲಾವಿಯೋ ಕೊಬೊಲ್ಲಿ ಹಣಾಹಣಿ

<><><><>

ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಎಲ್‌ಪಿಜಿ ದರ ತೀವ್ರವಾಗಿ ಏರಿಕೆಯಾಗುತ್ತಿದ್ದರೂ, ಭಾರತದ ಗೃಹ ಬಳಕೆಯ ಗ್ರಾಹಕರಿಗೆ ಜಾಗತಿಕ ಮಟ್ಟದಲ್ಲೇ ಅತ್ಯಂತ ಕಡಿಮೆ ದರದಲ್ಲಿ ಅಡುಗೆ ಅನಿಲವನ್ನು ಒದಗಿಸಲಾಗುತ್ತಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ. ಈ ಕುರಿತು ಇಂದು ಪ್ರಕಟಣೆ ಹೊರಡಿಸಿರುವ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ, ನೆರೆಯ ಯಾವುದೇ ರಾಷ್ಟ್ರಗಳಿಗೆ ಹೋಲಿಸಿದರೆ ಭಾರತದಲ್ಲಿ ಸಿಲಿಂಡರ್ ಬೆಲೆ ಕಡಿಮೆಯಿದೆ. ಅಷ್ಟೇ ಅಲ್ಲದೆ ಅಮೆರಿಕ, ಆಸ್ಟ್ರೇಲಿಯಾ ಮತ್ತು ಕೆನಡಾದಂತಹ ಮುಂದುವರಿದ ಆರ್ಥಿಕತೆ ಹೊಂದಿರುವ ದೇಶಗಳಿಗಿಂತಲೂ ಭಾರತದಲ್ಲಿ ಗ್ಯಾಸ್ ದರ ಕೈಗೆಟುಕುವಂತಿದೆ ಎಂದು ಸ್ಪಷ್ಟಪಡಿಸಿದೆ. ದೇಶೀಯ ಮಾರುಕಟ್ಟೆಯಲ್ಲಿ ಪ್ರತಿ ೧೪.೨ ಕೆಜಿ ಸಿಲಿಂಡರ್ ದರವನ್ನು ೨೯ ರೂಪಾಯಿ ಹೆಚ್ಚಳ ಮಾಡಲಾಗಿದ್ದರೂ, ಸಾರ್ವಜನಿಕರ ಹಿತದೃಷ್ಟಿಯಿಂದ ಸಬ್ಸಿಡಿಯನ್ನು ಮುಂದುವರಿಸಲಾಗಿದೆ. ದೆಹಲಿಯಲ್ಲಿ ಸಾಮಾನ್ಯ ಗ್ರಾಹಕರಿಗೆ ಗೃಹ ಬಳಕೆಯ ಸಿಲಿಂಡರ್‌ನ ಚಿಲ್ಲರೆ ಮಾರಾಟ ದರ ೯೪೨ ರೂಪಾಯಿಯಾಗಿದೆ. ಆದರೆ, 'ಪ್ರಧಾನ ಮಂತ್ರಿ ಉಜ್ವಲ ಯೋಜನೆ'ಯ ಫಲಾನುಭವಿಗಳಿಗೆ ವಾರ್ಷಿಕವಾಗಿ ಮೊದಲ ನಾಲ್ಕು ರೀಫಿಲ್‌ಗಳವರೆಗೆ ತಲಾ ೩೦೦ ರೂಪಾಯಿಗಳ ಸಬ್ಸಿಡಿ ಹಣವನ್ನು ನೇರವಾಗಿ ಅವರ ಬ್ಯಾಂಕ್ ಖಾತೆಗೆ ಜಮೆ ಮಾಡಲಾಗುತ್ತಿದೆ. ಈ ನೇರ ನಗದು ವರ್ಗಾವಣೆ-ಡಿಬಿಟಿ ಯೋಜನೆಯಿಂದಾಗಿ 'ಉಜ್ವಲ ಯೋಜನೆಯ' ಗ್ರಾಹಕರಿಗೆ ಪ್ರತಿ

ಸಿಲಿಂಡರ್ ಕೇವಲ ೬೪೨ ರೂಪಾಯಿ ದರದಲ್ಲಿ ಲಭ್ಯವಾಗುತ್ತಿದೆ ಎಂದು ಸಚಿವಾಲಯ ತಿಳಿಸಿದೆ. ಪ್ರಸ್ತುತ ಅಂತಾರಾಷ್ಟ್ರೀಯ ಮಾರುಕಟ್ಟೆಯ ಪರಿಸ್ಥಿತಿಯಿಂದಾಗಿ ೧೪.೨ ಕೆಜಿ ದೇಶೀಯ ಸಿಲಿಂಡರ್‌ನ ಪೂರೈಕೆ ವೆಚ್ಚವು ೧ ಸಾವಿರದ ೬೦೦ ರೂಪಾಯಿಗೂ ಅಧಿಕ ತಲುಪಿದ್ದು, ಸದ್ಯ ಪ್ರತಿ ಸಿಲಿಂಡರ್ ಮೇಲೆ ಸುಮಾರು ೭೦೦ ರೂಪಾಯಿ ನಷ್ಟವನ್ನು ಸರ್ಕಾರವೇ ಭರಿಸುತ್ತಿದೆ.

<><><><>

ಭಾರತ ಮತ್ತು ಇಂಡೋನೇಷ್ಯಾ ನಡುವಿನ ಜಂಟಿ ಆಯೋಗದ ಸಭೆಯು ನಾಲ್ಕು ವರ್ಷಗಳ ನಂತರ ಇಂದು ನವದೆಹಲಿಯಲ್ಲಿ ಸಮಾವೇಶಗೊಂಡಿದ್ದು, ಈ ಅವಧಿಯಲ್ಲಿ ಉಭಯ ರಾಷ್ಟ್ರಗಳ ದ್ವಿಪಕ್ಷೀಯ ಸಂಬಂಧಗಳಲ್ಲಿ ಮಹತ್ವದ ಪ್ರಗತಿಯಾಗಿದೆ ಎಂದು ಕೇಂದ್ರ ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ತಿಳಿಸಿದ್ದಾರೆ. ಸಭೆಯ ಜಂಟಿ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕಳೆದ ವರ್ಷವಷ್ಟೇ ಉಭಯ ದೇಶಗಳು ತಮ್ಮ ರಾಜತಾಂತ್ರಿಕ ಬಾಂಧವ್ಯದ ೭೫ನೇ ವರ್ಷದ ಮೈಲಿಗಲ್ಲನ್ನು ಆಚರಿಸಿರುವುದನ್ನು ಸ್ಮರಿಸಿದರು. ಉಭಯ ದೇಶಗಳ ನಡುವಿನ ಸಂಬಂಧವನ್ನು ಮತ್ತಷ್ಟು ವಿಸ್ತರಿಸುವ ಆಶಯ ವ್ಯಕ್ತಪಡಿಸಿದ ಸಚಿವರು, ರಾಜಕೀಯ, ರಕ್ಷಣೆ, ಭದ್ರತೆ, ಸಾಗರ ಸಹಕಾರ, ವ್ಯಾಪಾರ-ಹೂಡಿಕೆ, ಆರೋಗ್ಯ, ಔಷಧೀಯ ವಲಯ, ಆಹಾರ ಭದ್ರತೆ, ಪ್ರವಾಸೋದ್ಯಮ, ಶಿಕ್ಷಣ ಹಾಗೂ ಸಾಂಸ್ಕೃತಿಕ ವಿನಿಮಯ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ದ್ವಿಪಕ್ಷೀಯ ಸಹಕಾರದ ಕುರಿತು ವಿಸ್ತೃತ ಮಾತುಕತೆ ನಡೆಸಲು ಉತ್ಸುಕರಾಗಿರುವುದಾಗಿ ತಿಳಿಸಿದರು.

<><><><>

ಇಂದು ವಿಶ್ವ ಆಹಾರ ಸುರಕ್ಷತಾ ದಿನ. ಈ ಹಿನ್ನೆಲೆಯಲ್ಲಿ ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಜೆ.ಪಿ.ನಡ್ಡಾ, ದೇಶದ ಜನತೆಗೆ ಸುರಕ್ಷಿತ ಹಾಗೂ ಸ್ವಚ್ಛ ಆಹಾರ ಸೇವನೆಯ ಮಹತ್ವವನ್ನು ಪುನರುಚ್ಚರಿಸಿದ್ದಾರೆ. ಆರೋಗ್ಯಕರ ಭವಿಷ್ಯಕ್ಕಾಗಿ ಸುರಕ್ಷಿತ ಮತ್ತು ನೈರ್ಮಲ್ಯಯುತ ಆಹಾರವನ್ನು ಖಚಿತಪಡಿಸುವಲ್ಲಿ ಕೇಂದ್ರ ಸರ್ಕಾರ ಬದ್ಧವಾಗಿದೆ ಎಂದು ಅವರು ತಿಳಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಸಂದೇಶ ಹಂಚಿಕೊಂಡಿರುವ ಸಚಿವರು, ನಾಗರಿಕರು ಆರೋಗ್ಯಕರ ಆಹಾರ ಪದ್ಧತಿಗಳನ್ನು ಅಳವಡಿಸಿಕೊಳ್ಳುವುದರ ಮೂಲಕ ಸದೃಢ ಮತ್ತು ಆತ್ಮನಿರ್ಭರ ಭಾರತ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ಕರೆ ನೀಡಿದ್ದಾರೆ. ಅವರು, ಪ್ರಧಾನಿ ನರೇಂದ್ರ ಮೋದಿ ಅವರ ಸಂದೇಶವನ್ನು ಉಲ್ಲೇಖಿಸಿ, ಅಡುಗೆ ಎಣ್ಣೆಯ ಬಳಕೆಯನ್ನು ಶೇಕಡಾ ೧೦ರಷ್ಟು ಕಡಿಮೆ ಮಾಡಿ, ಸಮತೋಲಿತ ಆಹಾರ ಪದ್ಧತಿಯನ್ನು ಅಳವಡಿಸಿಕೊಳ್ಳುವಂತೆ ಜನರಿಗೆ ಮನವಿ ಮಾಡಿದರು. ಇದು ಉತ್ತಮ ಆರೋಗ್ಯ ಹಾಗೂ ಬಲಿಷ್ಠ ರಾಷ್ಟ್ರ ನಿರ್ಮಾಣಕ್ಕೆ ಸಹಕಾರಿಯಾಗಲಿದೆ ಎಂದು ಹೇಳಿದರು. 'ಸಮಸ್ಯೆಯಿಂದ ಪರಿಹಾರದವರೆಗೆ; ಎಲ್ಲೆಡೆ ಸುರಕ್ಷಿತ ಆಹಾರ ಎಂಬುದು ಈ ವರ್ಷದ ಘೋಷವಾಕ್ಯವಾಗಿದೆ. ಆಹಾರ ಉತ್ಪಾದನೆ, ಸಂಸ್ಕರಣೆ, ಸಾಗಣೆ ಮತ್ತು ಬಳಕೆಯ ಪ್ರತಿಯೊಂದು ಹಂತದಲ್ಲೂ ಸುರಕ್ಷತಾ ಕ್ರಮಗಳನ್ನು ಅನುಸರಿಸುವ ಮೂಲಕ ಆರೋಗ್ಯಕರ ಸಮಾಜ ನಿರ್ಮಾಣ ಸಾಧ್ಯವೆಂಬ ಸಂದೇಶವನ್ನು ಈ ವರ್ಷದ ಆಚರಣೆ ಸಾರುತ್ತದೆ.

<><><><>

ಸಿಬಿಎಸ್ಇ ೧೨ನೇ ತರಗತಿ ಪರೀಕ್ಷೆಯ ಉತ್ತರ ಪತ್ರಿಕೆಗಳ ಅಂಕಗಳ ಪರಿಶೀಲನೆ ಹಾಗೂ ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ಇಂದು ಕೊನೆಯ ದಿನವಾಗಿದೆ. ಈ ಕುರಿತು ಮಾಹಿತಿ ನೀಡಿರುವ ಕೇಂದ್ರೀಯ ಪ್ರೌಢಶಿಕ್ಷಣ ಮಂಡಳಿ, ಆನ್‌ಲೈನ್ ಪೋರ್ಟಲ್ ಇಂದು ಮಧ್ಯರಾತ್ರಿಯವರೆಗೆ ತೆರೆದಿರಲಿದ್ದು, ಆಸಕ್ತ ವಿದ್ಯಾರ್ಥಿಗಳು ನಿಗದಿತ ಗಡುವಿನೊಳಗೆ ಅರ್ಜಿ ಸಲ್ಲಿಸುವಂತೆ ಸೂಚಿಸಿದೆ.

<><><><>

ಮುಂಬರುವ ದಶಕದಲ್ಲಿ ಜಾಗತಿಕ ತೈಲ ಬೇಡಿಕೆಯ ಒಟ್ಟು ಬೆಳವಣಿಗೆಯಲ್ಲಿ ಭಾರತವೇ ಅರ್ಧದಷ್ಟು ಪಾಲನ್ನು ಹೊಂದಿರಲಿದ್ದು, ಜಾಗತಿಕ ವಿದ್ಯುತ್ ಬಳಕೆಯ ಹೆಚ್ಚಳದಲ್ಲಿ ಶೇಕಡಾ ೧೫ ರಷ್ಟು ಕೊಡುಗೆ ನೀಡಲಿದೆ ಎಂದು ರಷ್ಯಾದ 'ರೊಸ್ನೆಫ್ಟ್' ತೈಲ ಸಂಸ್ಥೆಯ ಮುಖ್ಯಸ್ಥ ಇಗೊರ್ ಸೆಚಿನ್ ತಿಳಿಸಿದ್ದಾರೆ. 'ಸೇಂಟ್ ಪೀಟರ್ಸ್‌ಬರ್ಗ್ ಅಂತಾರಾಷ್ಟ್ರೀಯ ಆರ್ಥಿಕ ವೇದಿಕೆ'ಯಲ್ಲಿ ಮಾತನಾಡಿದ ಅವರು, ೨೦೩೫ರ ವೇಳೆಗೆ ಭಾರತದ ತೈಲ ಬಳಕೆಯು ಶೇಕಡಾ ೪೪ರಷ್ಟು ಹೆಚ್ಚಳ ಕಂಡು, ದಿನಕ್ಕೆ ಸುಮಾರು ೮ ದಶಲಕ್ಷ ಬ್ಯಾರೆಲ್‌ಗಳಿಗೆ ತಲುಪಲಿದೆ ಹಾಗೂ ವಿದ್ಯುತ್ ಬೇಡಿಕೆಯು ಶೇಕಡಾ ೮೦ ರಷ್ಟು ಏರಿಕೆಯಾಗಿ ೩ ಸಾವಿರ ಟೆರಾವ್ಯಾಟ್- ಪ್ರತಿ ಗಂಟೆಗೆ ತಲುಪಲಿದೆ ಎಂದು ಅಂದಾಜಿಸಿದರು. ಭಾರತವನ್ನು ಜಾಗತಿಕ ಇಂಧನ ಮಾರುಕಟ್ಟೆಯ ವಿಶಿಷ್ಟ ಹಾಗೂ ಪ್ರಮುಖ ಕಾರ್ಯತಂತ್ರದ ಪಾಲುದಾರ ರಾಷ್ಟ್ರ ಎಂದು ಅವರು ಬಣ್ಣಿಸಿದ್ದಾರೆ.

<><><><>

ಕೇಂದ್ರ ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವ ಡಾ.ಮನ್ಸುಖ್ ಮಾಂಡವೀಯಾ ಅವರು ನವದೆಹಲಿಯಲ್ಲಿ ಇಂದು ಮುಂಜಾನೆ ನಡೆದ "ಫಿಟ್ ಇಂಡಿಯಾ ಸಂಡೇಸ್ ಆನ್ ಸೈಕಲ್" ಅಭಿಯಾನದ ೭೭ನೇ ಆವೃತ್ತಿಯಲ್ಲಿ ಸಕ್ರಿಯವಾಗಿ ಪಾಲ್ಗೊಂಡಿದ್ದರು. ಈ ಸಂದರ್ಭದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಸೈಕಲ್ ಚಾಲನೆಯು, ನಮ್ಮ ಪರಿಸರವನ್ನು ಸ್ವಚ್ಛವಾಗಿಡಲು ನೆರವಾಗುವುದರ ಜೊತೆಗೆ, ಇಂದಿನ ಪ್ರಮುಖ ಸಮಸ್ಯೆಯಾದ ಸಂಚಾರ ದಟ್ಟಣೆಗೆ ಅತ್ಯುತ್ತಮ ಪರಿಹಾರವನ್ನು ಒದಗಿಸುತ್ತದೆ ಎಂದು ಅಭಿಪ್ರಾಯಪಟ್ಟರು.

<><><><>

ಉದ್ಯೋಗದ ನಿಮಿತ್ತ ಯುಎಇನಲ್ಲಿ ಸಿಲುಕಿ, ಕಳೆದ ಮೂರು ವರ್ಷಗಳಿಂದ ಕುಟುಂಬದೊಂದಿಗೆ ಸಂಪರ್ಕ ಕಳೆದುಕೊಂಡಿದ್ದ ಒಡಿಶಾದ ಹಸ್ತಾ ಮಹಾನಂದಾ ಎಂಬ ಮಹಿಳೆಯನ್ನು ದುಬೈನಲ್ಲಿರುವ ಭಾರತೀಯ ಕಾನ್ಸುಲೇಟ್ ಕಚೇರಿಯು ಯಶಸ್ವಿಯಾಗಿ ರಕ್ಷಿಸಿದೆ. ಹಸ್ತಾ ಅವರ ಸಂಪರ್ಕ ಸಂಪೂರ್ಣವಾಗಿ ಕಡಿತಗೊಂಡಾಗ ಆತಂಕಗೊಂಡ ಸಂಬಂಧಿಕರು ಒಡಿಶಾ ಹೈಕೋರ್ಟ್ ಮೊರೆ ಹೋಗಿದ್ದರು. ನ್ಯಾಯಾಲಯದ ಆದೇಶದ ಬೆನ್ನಲ್ಲೇ ಕಾರ್ಯಪ್ರವೃತ್ತರಾದ ದುಬೈನ ಭಾರತೀಯ ರಾಯಭಾರ ಕಚೇರಿ ಅಧಿಕಾರಿಗಳು ಮಹಿಳೆಯನ್ನು ಪತ್ತೆಹಚ್ಚಿದ್ದಾರೆ.

<><><><>

ಭಾರತದ ಸಾರ್ವಜನಿಕ ಪ್ರಸಾರ ಸೇವೆ 'ಆಕಾಶವಾಣಿ'ಯು ತನ್ನ ೯೦ ವರ್ಷಗಳ ಐತಿಹಾಸಿಕ ಪಯಣವನ್ನು ಯಶಸ್ವಿಯಾಗಿ ಪೂರೈಸಿರುವುದಕ್ಕೆ ಆಂಧ್ರಪ್ರದೇಶದ ರಾಜ್ಯಪಾಲರಾದ ಜಸ್ಟಿಸ್ ಎಸ್.ಅಬ್ದುಲ್ ನಜೀರ್ ಅವರು ಶುಭ ಹಾರೈಕೆಗಳನ್ನು ಸಲ್ಲಿಸಿದ್ದಾರೆ. ಭಾರತೀಯ ಸಾರ್ವಜನಿಕ

ಪ್ರಸಾರ ಇತಿಹಾಸದಲ್ಲಿ ಇದೊಂದು ಅತ್ಯಂತ ಮಹತ್ವದ ಮೈಲಿಗಲ್ಲು ಎಂದು ಬಣ್ಣಿಸಿರುವ ಅವರು, ಕಳೆದ ಒಂಬತ್ತು ದಶಕಗಳಿಂದ ಸಮಾಜಕ್ಕೆ ಆಕಾಶವಾಣಿ ನೀಡಿರುವ ಅಮೂಲ್ಯ ಕೊಡುಗೆಗಳನ್ನು ಶ್ಲಾಘಿಸಿದ್ದಾರೆ. ದೇಶದ ಕೋಟ್ಯಂತರ ಜನರಿಗೆ ನಿರಂತರವಾಗಿ ಮಾಹಿತಿ, ಶಿಕ್ಷಣ ಮತ್ತು ಮನರಂಜನೆಯನ್ನು ತಲುಪಿಸುವಲ್ಲಿ ಆಕಾಶವಾಣಿ ಪ್ರಮುಖ ಪಾತ್ರ ವಹಿಸಿದೆ. ನಾಗರಿಕರನ್ನು ಪರಸ್ಪರ ಜೋಡಿಸುವಲ್ಲಿ ಹಾಗೂ ಸಾರ್ವಜನಿಕ ಜಾಗೃತಿ ಮೂಡಿಸುವಲ್ಲಿ ಈ ಸಂಸ್ಥೆಯ ಸೇವೆ ಅನನ್ಯವಾಗಿದೆ ಎಂದು ರಾಜ್ಯಪಾಲರು ಹೇಳಿದ್ದಾರೆ.

<><><><>

ಕರಾವಳಿ ಕರ್ನಾಟಕ, ಕೇರಳ ಮತ್ತು ಮಾಹೆಯ ಕೆಲವು ಪ್ರದೇಶಗಳಲ್ಲಿ ಇಂದು ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಇಂದು ಆಂಧ್ರಪ್ರದೇಶ, ಬಿಹಾರ, ಜಾರ್ಖಂಡ್, ಮಧ್ಯಪ್ರದೇಶ, ಒಡಿಶಾ, ತೆಲಂಗಾಣ, ಪಶ್ಚಿಮ ಬಂಗಾಳ ಮತ್ತು ಸಿಕ್ಕಿಂ ರಾಜ್ಯಗಳ ವಿವಿಧೆಡೆ ಸಿಡಿಲು ಹಾಗೂ ಗುಡುಗು ಸಹಿತ ಭಾರಿ ಮಳೆಯಾಗುವ ನಿರೀಕ್ಷೆಯಿದೆ. ಈ ಭಾಗಗಳಲ್ಲಿ ಮುನ್ನೆಚ್ಚರಿಕೆ ವಹಿಸುವಂತೆ ಸಾರ್ವಜನಿಕರಿಗೆ ಸೂಚಿಸಲಾಗಿದೆ. ಮತ್ತೊಂದೆಡೆ, ಕರಾವಳಿ ಆಂಧ್ರಪ್ರದೇಶ ಮತ್ತು ಒಡಿಶಾದ ಕೆಲವು ಭಾಗಗಳಲ್ಲಿ ತೀವ್ರತರದ ಬಿಸಿಗಾಳಿಯ ವಾತಾವರಣ ಇರಲಿದೆ ಎಂದು ಅಂದಾಜಿಸಲಾಗಿದೆ.

<><><><>

ನವ ಚಂಡಿಗಢದ ಮುಲ್ಲನಪುರ ಮಹಾರಾಜ ಯದವೀಂದ್ರ ಸಿಂಗ್ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಭಾರತ ಮತ್ತು ಅಫ್ಘಾನಿಸ್ತಾನದ ನಡುವಿನ ಏಕೈಕ ಟೆಸ್ಟ್ ಪಂದ್ಯದ ಎರಡನೇ ದಿನದಾಟಲ್ಲಿಂದು ತನ್ನ ಮೊದಲನೇ ಇನ್ನಿಂಗ್ಸ್ ಮುಂದುವರಿಸಿರುವ ಭಾರತ, ಇತ್ತೀಚಿನ ವರದಿಯಂತೆ ೮ ವಿಕೆಟ್ ನಷ್ಟಕ್ಕೆ ೫೪೪ ರನ್ ಗಳಿಸಿ ಆಡುತ್ತಿತ್ತು.

<><><><>

ಪ್ಯಾರಿಸ್‌ನಲ್ಲಿ ನಡೆಯುತ್ತಿರುವ ಪ್ರತಿಷ್ಠಿತ ಫ್ರೆಂಚ್ ಓಪನ್ ಗ್ರ್ಯಾಂಡ್‌ಸ್ಲ್ಯಾಮ್ ಟೆನಿಸ್ ಪಂದ್ಯಾವಳಿಯ ಪುರುಷರ ವಿಭಾಗದ ಫೈನಲ್‌ನಲ್ಲಿಂದು ಜರ್ಮನಿಯ ಅಲೆಕ್ಸಾಂಡರ್ ಜ್ವೆರೇವ್ ಮತ್ತು ಇಟಲಿಯ ಫ್ಲಾವಿಯೋ ಕೊಬೊಲ್ಲಿ ಪ್ರಶಸ್ತಿಗಾಗಿ ಸೆಣಸಾಟ ನಡೆಸಲಿದ್ದಾರೆ.  ಈ ಪಂದ್ಯ ಭಾರತೀಯ ಕಾಲಮಾನ ಸಂಜೆ ೬.೩೦ ಕ್ಕೆ ಆರಂಭವಾಗಲಿದೆ.

<><><><>

೬೬೧ ಕೋಟಿ ರೂಪಾಯಿ ಸರ್ಕಾರಿ ನಿಧಿ ದುರುಪಯೋಗ ಮತ್ತು ವಂಚನೆ ಪ್ರಕರಣದ ತನಿಖೆಯ ಭಾಗವಾಗಿ, ಕೇಂದ್ರ ತನಿಖಾ ದಳ - ಸಿಬಿಐ ನಿನ್ನೆ ಚಂಡೀಗಢ, ಪಂಚಕುಲಾ ಹಾಗೂ ದೆಹಲಿ ಎನ್‌ಸಿಆರ್ ಪ್ರದೇಶಗಳಲ್ಲಿರುವ ಆರು ಸ್ಥಳಗಳಲ್ಲಿ ಶೋಧ ಕಾರ್ಯಾಚರಣೆ ನಡೆಸಿದೆ. ಈ ಪ್ರಕರಣವು, ಐಡಿಎಫ್‌ಸಿ ಫಸ್ಟ್ ಬ್ಯಾಂಕ್ ಮತ್ತು ಎಯು ಫೈನಾನ್ಸ್‌ಗೆ ಸಂಬಂಧಿಸಿದ ವಂಚನೆ ಪ್ರಕರಣವಾಗಿದ್ದು, ಹರಿಯಾಣ ಸರ್ಕಾರದ ಎಂಟು ಇಲಾಖೆಗಳು ಹಾಗೂ ಚಂಡೀಗಢ ಮಹಾನಗರ ಪಾಲಿಕೆಯ ಎರಡು ಇಲಾಖೆಗಳು ಮತ್ತು ಕ್ರೆಸ್ಟ್ ಚಂಡೀಗಢ ಸಂಸ್ಥೆಯ ಸರ್ಕಾರಿ ನಿಧಿಗಳ ದುರುಪಯೋಗಕ್ಕೆ ಸಂಬಂಧಿಸಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>